# ಕರ್ನಾಟಕ ಸರ್ಕಾರ ನಡವಳಿಗಳು

ವಿಷಯ:- ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತದ 2022-23ನೇ ಸಾಲಿನ ವಾರ್ಷಿಕ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:- ಪ್ರಸ್ತಾವನೆ ಸಂಖ್ಯೆ: ಕ.ಮ.ಸ.ಅ.ನಿ/2022-23ನೇ ಸಾಲಿನ ಕ್ರಿಯಾ ಯೋಜನೆ ಸಿಆರ್-10/2022-23, ದಿನಾಂಕ:31.03.2022.

******

ಪ್ರಸ್ತಾವನೆ:-

ಮೇಲೆ ಓದಲಾದ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ ನಿ., ರವರ ಪ್ರಸ್ತಾವನೆಯಲ್ಲಿ 2022-23ನೇ ಸಾಲಿಗೆ ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮಕ್ಕೆ ರೂ.1000.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿರುತ್ತದೆ. ದಿನಾಂಕ:24.03.2022ರಂದು ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದ 1ನೇ ನಿರ್ದೇಶಕ ಮಂಡಳಿ ಸಭೆಯ ನಡವಳಿಯಂತೆ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲು ತೀರ್ಮಾನಿಸಲಾಗಿದೆ.

(ರೂ. ಲಕ್ಷಗಳಲ್ಲಿ)

| ಕ್ರ. ಸಂ | ಯೋಜನೆ ಹೆಸರು | ಭೌತಿಕ ಗುರಿ | ಆರ್ಥಿಕ |
|---|---|---|---|
| 1. | ಜೀಜಾವು-ಜಲ ಭಾಗ್ಯ ಯೋಜನೆ (ಗಂಗಾ ಕಲ್ಯಾಣ ನೀರಾವರಿ ಯೋಜನೆ) | 164 | 402.00 |
| 2. | ಶ್ರೀ ಶಹಜೀ ರಾಜೇ ಸಮೃದ್ಧಿ ಯೋಜನೆ (ಎಸ್.ಎಸ್.ಆರ್.ಎಸ್.ವೈ) (ಸ್ವಯಂ ಉದ್ಯೋಗ ನೇರ ಸಾಲ ಮತ್ತು ಸಹಾಯಧನ ಯೋಜನೆ) | 268 | 134.00 |
| 3. | "ಚೈತನ್ಯ" - ಬ್ಯಾಂಕ್‌ಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗ ಸಾಲ ಮತ್ತು ಸಹಾಯಧನ ಯೋಜನೆ | 603 | 134.00 |
| 4. | ಅಮೃತ್ ಯೋಜನೆ (ಅಮೃತ್ ಮುನ್ನಡೆ) | | 100.00 |
| 5. | "ಕೆಳದಿ ಚನ್ನಮ್ಮ-ಸುರಭಿಯೋಜನೆ" (ಗೋವು ವಿತರಣೆ ಯೋಜನೆ) | 200 | 100.00 |
| 6. | ನಿಗಮದ ಪ್ರಾರಂಭೋತ್ಸವ ಮತ್ತು ಇತರೆ ಗಣ್ಯ ವ್ಯಕ್ತಿಗಳ ಸಮಾರಂಭಗಳ ವೆಚ್ಚ | | 10.00 |
| 7. | ಆಡಳಿತಾತ್ಮಕ ವೆಚ್ಚ | | 120.00 |
| | **ಒಟ್ಟು:** | **1235** | **1000.00** |

ಆದುದರಿಂದ, 2022-23ನೇ ಸಾಲಿನಲ್ಲಿ ಈ ಮೇಲ್ಕಂಡ ಯೋಜನೆಗಳಿಗೆ ಸಂಬಂಧಿಸಿದಂತೆ ನಿಗದಿಪಡಿಸಲಾದ ಆರ್ಥಿಕ ಮತ್ತು ಭೌತಿಕ ಗುರಿಯಂತೆ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತದ ಕ್ರಿಯಾ ಯೋಜನೆಗೆ ಸರ್ಕಾರದ ಅನುಮೋದನೆ ನೀಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

07/04/22

2...

ಪ್ರಸ್ತಾವನೆಯನ್ನುಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 212 ಬಿಎಂಎಸ್ 2021,**

**ಬೆಂಗಳೂರು, ದಿನಾಂಕ: 07-04-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿಗೆ ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದಿಂದ ಈ ಕೆಳಕಂಡ 05 ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಿ ಆದೇಶಿಸಲಾಗಿದೆ.

| ಕ್ರ ಸಂ | ಯೋಜನೆಯ ಹೆಸರು |
|---|---|
| 1. | ಜೀಜಾವು-ಜಲ ಭಾಗ್ಯ ಯೋಜನೆ (ಗಂಗಾ ಕಲ್ಯಾಣ ನೀರಾವರಿ ಯೋಜನೆ) |
| 2. | ಶ್ರೀ ಶಹಜೀ ರಾಜೇ ಸಮೃದ್ಧಿ ಯೋಜನೆ (ಎಸ್.ಎಸ್.ಆರ್.ಎಸ್.ವೈ) (ಸ್ವಯಂ ಉದ್ಯೋಗ ನೇರ ಸಾಲ ಮತ್ತು ಸಹಾಯಧನ ಯೋಜನೆ) |
| 3. | ಚೈತನ್ಯ - ಬ್ಯಾಂಕ್‌ಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗ ಸಾಲ ಮತ್ತು ಸಹಾಯಧನ ಯೋಜನೆ |
| 4. | ಸ್ವಾತಂತ್ರ್ಯ ಅಮೃತ್ ಮಹೋತ್ಸವದ ಮುನ್ನಡೆ ಯೋಜನೆ * |
| 5. | ಕೆಳದಿ ಚನ್ನಮ್ಮ- ಸುರಭಿಯೋಜನೆ ** |

* ಸ್ವಾತಂತ್ರ್ಯ ಅಮೃತ್ ಮಹೋತ್ಸವದ ಮುನ್ನಡೆ ಯೋಜನೆ ಆಯವ್ಯಯ ಭಾಷಣ 2022-23 ರಡಿಯಲ್ಲಿ ಹೊಸ ಯೋಜನೆ ಘೋಷಣೆಯಾಗಿದ್ದು ಸರ್ಕಾರವು ಹೊರಡಿಸುವ ಮಾರ್ಗಸೂಚಿಗಳನ್ವಯ ಯೋಜನೆಯನ್ನು ಅನುಷ್ಠಾನಗೊಳಿಸುವುದು.

** ಕೆಳದಿ ಚನ್ನಮ್ಮ - ಸುರಭಿ ಯೋಜನೆಯು ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತ ಪ್ರಸ್ತಾಪಿಸಿರುವ ಹೊಸ ಯೋಜನೆಯಾಗಿದ್ದು, ಸರ್ಕಾರವು ಹೊರಡಿಸುವ ಮಾರ್ಗಸೂಚಿಗಳಂತೆ ಯೋಜನೆಯನ್ನು ಅನುಷ್ಠಾನ ಮಾಡುವುದು.

**ಷರತ್ತುಗಳು:-**

1. ಕರ್ನಾಟಕ ಸರ್ಕಾರದ ಸುವಿಧಾ ಪೋರ್ಟಲ್‌ನಲ್ಲಿ ಈಗಾಗಲೇ ಅಳವಡಿಸಿರುವ ಯೋಜನೆಗಳಿಗೆ ಆನ್ ಲೈನ್ ವಿಧಾನದಲ್ಲಿ ಅರ್ಜಿಗಳನ್ನು ಪಡೆಯತಕ್ಕದ್ದು, ಅರ್ಜಿಗಳನ್ನು ಅಹ್ವಾನಿಸಲು ನಿಗಮವು ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಕನಿಷ್ಠ 30 ದಿನಗಳ ಕಾಲಾವಕಾಶ ನೀಡುವುದು.
2. ಸದರಿ ಯೋಜನೆಗಳನ್ನು ಸೆಕ್ಷನ್ 07 ಆಧಾರ್ ಕಾಯ್ದೆ ಅಡಿಯಲ್ಲಿ ಅಧಿಸೂಚಿಸಲು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮವು ಕೂಡಲೇ ಸೂಕ್ತ ಪ್ರಸ್ತಾವನೆ ಸಲ್ಲಿಸುವುದು. ಸಕ್ಷಮ ಪ್ರಾಧಿಕಾರದಿಂದ ಸೆಕ್ಷನ್ 07 ಆಧಾರ್ ಕಾಯ್ದೆ ಅಡಿಯಲ್ಲಿ ಅಧಿಸೂಚನೆ ಹೊರಡಿಸಿದ ನಂತರ ನಿಯಮಾನುಸಾರ ಕಡ್ಡಾಯವಾಗಿ ಫಲಾನುಭವಿಯ ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ಅನುದಾನ ಸಂದಾಯ ಮಾಡಬೇಕು.

07/04/22

3. ಸದರಿ ಯೋಜನೆಗಳ ಮಾರ್ಗಸೂಚಿಯಲ್ಲಿ ಸರ್ಕಾರವು ಏನೇ ಬದಲಾವಣೆ ಮಾಡಿದ್ದಲ್ಲಿ ಆ ದಿನದಿಂದಲೇ ಬದಲಾವಣೆ ಆಗುವ ಮಾರ್ಗಸೂಚಿಗಳ ಅನುಸಾರ ಯೋಜನೆಗಳನ್ನು ಅನುಷ್ಠಾನ ಮಾಡುವುದು.
4. ನಿಗಮದ ಹಂತದಲ್ಲಿ ಯಾವುದೇ ಯೋಜನೆಯನ್ನು ಬದಲಾವಣೆ ಮಾಡಬೇಕಾದಲ್ಲಿ ಸರ್ಕಾರದ ಪೂರ್ವಾನುಮೋದನೆಯನ್ನು ಕಡ್ಡಾಯವಾಗಿ ಪಡೆಯತಕ್ಕದ್ದು.
5. ನಿಗಮಕ್ಕೆ ಒದಗಿಸಲಾಗಿರುವ ಅನುದಾನದ ಮಿತಿಯಲ್ಲಿಯೇ ಯೋಜನೆಗಳನ್ನು ಅನುಷ್ಠಾನ ಮಾಡುವುದು.
6. ಯೋಜನಾವಾರು ಸ್ವೀಕೃತವಾದ ಅರ್ಜಿಗಳ ಸಂಖ್ಯೆ, ಆಯ್ಕೆ ಪ್ರಕ್ರಿಯೆಯ ವಿವರಗಳು ಮತ್ತು ನಡವಳಿಗಳು ಹಾಗೂ ಆರ್ಥಿಕ ಮತ್ತು ಭೌತಿಕ ಪ್ರಗತಿಯ ತಾಲ್ಲೂಕುವಾರು, ಜಿಲ್ಲಾವಾರು ಮಾಹಿತಿಯನ್ನು ನಿಗಮದ ಜಾಲತಾಣದಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಕಡ್ಡಾಯವಾಗಿ ವ್ಯವಸ್ಥಾಪಕ ನಿರ್ದೇಶಕರು ಅಳವಡಿಸತಕ್ಕದ್ದು.
7. ಮೇಲಿನ ಯೋಜನೆಗಳ ಫಲನಾಭವಿಗಳ ಆಯ್ಕೆಯಲ್ಲಿ ಸರ್ಕಾರದ ಇತರೆ ಇಲಾಖೆಗಳು /ನಿಗಮಗಳು /ಮಂಡಳಿಗಳು /ಪ್ರಾಧಿಕಾರಗಳು ಅನುಷ್ಠಾನಗೊಳಿಸುತ್ತಿರುವ ಇದೇ ರೀತಿಯ ಯೋಜನೆಗಳಲ್ಲಿನ ಫಲಾನುಭವಿಗಳ ಪುನರಾವರ್ತನೆಯಾಗಬಾರದು. ಹಾಗೂ ಈ ಹಿಂದೆ ಇದೇ ಯೋಜನೆಗಳಲ್ಲಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಹಂತದಲ್ಲಿ ಅನುಷ್ಠಾನಗೊಳಿಸಲಾಗುತಿದ್ದ ಯೋಜನೆಗಳಲ್ಲಿನ ಫಲಾನುಭವಿಗಳ ಪುನರಾವರ್ತನೆಯಾಗಬಾರದು.

ಈ ಆದೇಶವನ್ನು ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Sheenpaween 07/04/2022

(ಷಾಹೀನ್ ಪರ್ವೀನ್.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, (ಎಇ) (ಲೆಕ್ಕಪರಿಶೋಧನೆ-1&2) ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ, ನಿರ್ದೇಶಕರು, ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
4. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.

ಪ್ರತಿ ಮಾಹಿತಿಗಾಗಿ:

1. ಸರ್ಕಾರದ, ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸ ಸೌಧ, ಬೆಂಗಳೂರು.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.